**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) ಇವರು ನಿಯಮ 72ರ ಅಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ.**

**ಹೇಳಿಕೆ**

ಕರ್ನಾಟಕ ಲೋಕಸೇವಾ ಆಯೋಗದ ಭ್ರಷ್ಟ ವ್ಯವಸ್ಥೆಯಿಂದಾಗಿ ರಾಜ್ಯದ ಲಕ್ಷಾಂತರ ಪದವೀಧರರು ಅವಕಾಶ ವಂಚಿತರಾಗುತ್ತಿದ್ದಾರೆ ಹಾಗೂ ಕರ್ನಾಟಕ ಲೋಕಸೇವಾ ಆಯೋಗದ ಮೇಲೆ ನಂಬಿಕೆ ಇಲ್ಲದಂತಾಗಿರುವ ಗಂಭೀರ ವಿಷಯದ ಕುರಿತು ಸರ್ಕಾರದ ಗಮನ ಸೆಳೆಯಬಯಸುತ್ತೇನೆ.

**ಉತ್ತರ**

ಕರ್ನಾಟಕ ಲೋಕಸೇವಾ ಆಯೋಗವು ನಡೆಸುವ ನೇಮಕಾತಿ ಪ್ರಕ್ರಿಯೆಗಳಲ್ಲಿ ಪಾರದರ್ಶಕತೆಯನ್ನು ತರಲು ಮತ್ತು ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟುವ ಸಲುವಾಗಿ ಹಲವಾರು ಸುರಕ್ಷಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

- ಆಯೋಗದಲ್ಲಿ ಈ ಹಿಂದೆ ಕಾರ್ಯದರ್ಶಿಯವರೇ ಪರೀಕ್ಷಾ ನಿಯಂತ್ರಕರ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಶ್ರೀ ಪಿ.ಸಿ. ಹೋಟಾ ಸಮಿತಿಯು ನೀಡಿರುವ ವರದಿಯ ಆಧಾರದ ಮೇಲೆ ನೇಮಕಾತಿಗಳಲ್ಲಿ ಪಾರದರ್ಶಕತೆಯನ್ನು ತರಲು ಗೋಪ್ಯ ಕಾರ್ಯಗಳನ್ನು ನಿರ್ವಹಿಸಲು ಒಂದು ಪರೀಕ್ಷಾ ನಿಯಂತ್ರಕರ ಹುದ್ದೆಯನ್ನು ಸೃಜಿಸಲಾಗಿರುತ್ತದೆ ಮತ್ತು ಸದರಿ ಹುದ್ದೆಯನ್ನು ಭಾರತೀಯ ಆಡಳಿತ ಸೇವೆಯ ಅಧಿಕಾರಿಯವರಿಂದ ಭರ್ತಿ ಮಾಡಲಾಗುತ್ತಿದೆ.

- ಇದಲ್ಲದೆ, ಆಯೋಗದಲ್ಲಿನ ಪರೀಕ್ಷಾ ನಿಯಂತ್ರಕರಿಗೆ ಹೆಚ್ಚಿನ ಕಾರ್ಯದ ಒತ್ತಡವಿದ್ದ ಹಿನ್ನೆಲೆಯಲ್ಲಿ ಆಯೋಗದಲ್ಲಿದ್ದ ಜಂಟಿ ಕಾರ್ಯದರ್ಶಿ ಹುದ್ದೆಯನ್ನು ಜಂಟಿ ಪರೀಕ್ಷಾ ನಿಯಂತ್ರಕರ ಹುದ್ದೆಯೆಂದು ಪದನಾಮೀಕರಿಸಲಾಗಿರುತ್ತದೆ ಹಾಗೂ ಅಖಿಲ ಭಾರತ ಸೇವೆಯ ವೃಂದದ ಅಧಿಕಾರಿಯಿಂದ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಸದರಿ ಅಧಿಕಾರಿಗೆ ಗ್ರೂಪ್ 'ಸಿ' ವೃಂದದ ಪರೀಕ್ಷೋತ್ತರ ಕಾರ್ಯಗಳಲ್ಲದೆ ಇಲಾಖಾ ಪರೀಕ್ಷೆಗಳ ಪೂರ್ಣ ಗೌಪ್ಯ ಕಾರ್ಯಗಳನ್ನು ವಹಿಸಲಾಗಿರುತ್ತದೆ.

- ಆಯೋಗದಲ್ಲಿನ ಪರೀಕ್ಷಾ ಪೂರ್ವ ಮತ್ತು ಪರೀಕ್ಷೋತ್ತರ ಗೌಪ್ಯ ಕಾರ್ಯಗಳ ಮೇಲೆ ನಿಗಾ ವಹಿಸಲು, ಪಾರದರ್ಶಕತೆಯನ್ನು ಕಾಪಾಡಲು ಹಾಗೂ ಮಾಹಿತಿ ಸೋರಿಕೆಯನ್ನು ತಡೆಗಟ್ಟುವ ಸಲುವಾಗಿ ಗೌಪ್ಯ ಶಾಖೆಗಳಿಗೆ ಆಯೋಗದಲ್ಲಿ ಪ್ರತ್ಯೇಕವಾದ ಸ್ಥಳಾವಕಾಶವನ್ನು ಕಲ್ಪಿಸಲಾಗಿದ್ದು ಅಲ್ಲಿಗೆ ಅಧಿಕೃತ ವ್ಯಕ್ತಿಗಳನ್ನು ಹೊರತುಪಡಿಸಿ ಆಯೋಗದ ಇತರೆ ಅಧಿಕಾರಿ/ಸಿಬ್ಬಂದಿಗಳಾಗಲೀ ಹಾಗೂ ಇನ್ನಿತರ ವ್ಯಕ್ತಿಗಳ ಪ್ರವೇಶವನ್ನು ನಿರ್ಬಂಧಿಸಲು ಹಾಗೂ ಮೊಬೈಲ್ ಫೋನ್ ಕೊಂಡೊಯ್ಯುವುದನ್ನು ತಡೆಗಟ್ಟಲು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿರುತ್ತದೆ ಹಾಗೂ 24*7 C.C.T.V. Surveillance ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ.

- ಆಯೋಗದ ಪರೀಕ್ಷೆಗಳನ್ನು ನಡೆಸುವಂತಹ ಪರೀಕ್ಷಾ ಉಪಕೇಂದ್ರಗಳಲ್ಲಿ ಪ್ರತಿ ಪರೀಕ್ಷಾ ಕೊಠಡಿಗಳಿಗೆ ಮತ್ತು ನಿಯಂತ್ರಣ ಕೊಠಡಿಗೆ ಸಿ.ಸಿ.ಕ್ಯಾಮೆರಾಗಳನ್ನು ಅಳವಡಿಸಲಾಗುತ್ತಿದೆ.

- ಇದಲ್ಲದೆ, ಪರೀಕ್ಷೆ ನಡೆಯುವ ಮುನ್ನ ಪ್ರಶ್ನೆ ಪತ್ರಿಕೆ ಪರೀಕ್ಷಾ ಕೇಂದ್ರದಲ್ಲಿ ಸ್ವೀಕೃತವಾದ ಸಮಯದಿಂದ ಹಿಡಿದು ಪರೀಕ್ಷೆಗಳನ್ನು ಮುಗಿಸಿ ಪರೀಕ್ಷಾ ಸಾಮಾಗ್ರಿಗಳನ್ನು ಆಯೋಗಕ್ಕೆ

ರವಾನಿಸುವರೆಗಿನ ಸಂಪೂರ್ಣ ಪ್ರಕ್ರಿಯೆಗಳನ್ನು Time Stamp ವಿಡಿಯೋಗ್ರಾಫಿ ಮಾಡಿಸಲಾಗುತ್ತಿದೆ.

- ಅಭ್ಯರ್ಥಿಗಳು ಮೊಬೈಲ್, ಬ್ಲೂಟೂತ್ ಮತ್ತು ಇನ್ನಿತರೆ ಆಧುನಿಕ ಸಂವಹನ ಉಪಕರಣಗಳನ್ನು ಬಳಸಿ ದುರಾಚಾರ ಪ್ರಕರಣಗಳನ್ನು ಎಸಗುವುದನ್ನು ತಡೆಗಟ್ಟುವ ಸಲುವಾಗಿ ಪರೀಕ್ಷಾ ಉಪಕೇಂದ್ರಗಳಲ್ಲಿ ರೂಂ-ಜಾಮರ್‌ಗಳನ್ನು ಅಳವಡಿಸಲಾಗುತ್ತಿದೆ ಹಾಗೂ HHMD (Hand Held **Metal Detector)** ಯಂತ್ರದ ಸಹಾಯದಿಂದ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಗೆ ತೆರಳುವ ಮುನ್ನ ಪ್ರತಿ ಅಭ್ಯರ್ಥಿಯ ಸಂಪೂರ್ಣ ತಪಾಸಣೆ ಮಾಡಿಸಲಾಗುತ್ತಿದೆ.

- ಆಯೋಗದ ಪರೀಕ್ಷೆಗಳಲ್ಲಿ ಅಭ್ಯರ್ಥಿಗಳ impersonation ತಪ್ಪಿಸುವ ಸಲುವಾಗಿ Face Recognization/ Bio-metric ಹಾಜರಾತಿ ತೆಗೆದುಕೊಳ್ಳುವ ಪದ್ಧತಿಯನ್ನು ಜಾರಿ ಮಾಡಲಾಗಿರುತ್ತದೆ.

- ಪರೀಕ್ಷೆಗೆ ಪ್ರತಿ ಅಭ್ಯರ್ಥಿಗಳಿಗೆ ವ್ಯಕ್ತಿಗತ (Personalized O.M.R) ಓ.ಎಂ.ಆರ್. ಹಾಳೆಗಳನ್ನು ಒದಗಿಸಲಾಗುತ್ತದೆ ಹಾಗೂ ಓ.ಎಂ.ಆರ್. ಹಾಳೆಗಳನ್ನು ಎರಡು ಭಾಗಗಳನ್ನಾಗಿ ವಿಂಗಡಿಸಲಾಗಿದ್ದು, ಒಂದು ಭಾಗದಲ್ಲಿ ಅಭ್ಯರ್ಥಿಗಳ ವಿವರಗಳನ್ನು ಮತ್ತು ಇನ್ನೊಂದು ಭಾಗದಲ್ಲಿ ಉತ್ತರಗಳ ಆಯ್ಕೆಗಳನ್ನು ಒಳಗೊಂಡಿರುತ್ತದೆ. ಸದರಿ ಭಾಗಗಳನ್ನು ಪರೀಕ್ಷಾ ಉಪಕೇಂದ್ರಗಳಲ್ಲಿಯೇ Perforation ಮಾಡಿ ಪ್ರತ್ಯೇಕಿಸಿ ಪ್ರತ್ಯೇಕ Tamper Evident Cover ನಲ್ಲಿರಿಸಿ ಸೀಲ್ ಮಾಡಿರುವ ಬಂಡಲ್‌ಗಳನ್ನು ಆಯೋಗದಲ್ಲಿ ಸ್ವೀಕರಿಸಲಾಗುತ್ತಿದೆ.

- ಪರೀಕ್ಷಾ ಕೇಂದ್ರಗಳಿಗೆ ಅಭ್ಯರ್ಥಿಗಳನ್ನು ಹಂಚಿಕೆ ಮಾಡುವ ಸಂದರ್ಭದಲ್ಲಿ Radomization ಪದ್ಧತಿಯನ್ನು ಅಳವಡಿಸಿಕೊಳ್ಳಲಾಗುತ್ತಿದೆ.

- ಆಯೋಗದ ಕಛೇರಿಗೆ ಅನಧಿಕೃತ ವ್ಯಕ್ತಿಗಳ ಪ್ರವೇಶವನ್ನು ತಡೆಗಟ್ಟುವ ಸಲುವಾಗಿ ಆಯೋಗದ ಕಛೇರಿಗೆ ಸಾರ್ವಜನಿಕರ ಪ್ರವೇಶವನ್ನು ನಿರ್ಬಂಧಿಸಲಾಗಿದೆ.

ಮುಂದುವರೆದು, ಆಯೋಗದ ನೇಮಕಾತಿಗಳಲ್ಲಿ ಪಾರದರ್ಶಕತೆಯನ್ನು ತರಲು ವಿವಿಧ ಸುಧಾರಣೆಗಳನ್ನು ಮಾಡಲಾಗಿದೆ ಹಾಗೂ ಶ್ರೀ ಪಿ.ಸಿ. ಹೋಟಾ ಸಮಿತಿಯ ಶಿಫಾರಸ್ಸುಗಳನುಸಾರ ಮತ್ತು ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ನೇಮಕಾತಿ ನಿಯಮಗಳು ಹಾಗೂ ಆದೇಶಗಳನ್ವಯ ನೇಮಕಾತಿಯ ಪ್ರಕ್ರಿಯೆಯನ್ನು ನಿಗಧಿತ ಸಮಯದಲ್ಲಿ ಪೂರ್ಣಗೊಳಿಸಲು ಆಯೋಗದ ವತಿಯಿಂದ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

**ಸಂಖ್ಯೆ: ಸಿಆಸುಇ 50 ಎಸ್‌ಎಲ್‌ಎ 2025.**

(ಸಿದ್ದರಾಮಯ್ಯ)
**ಮುಖ್ಯಮಂತ್ರಿ**